RNU AIR DHARWAD

# JULY 28,2024
# ALL INDIA RADIO- DHARWAD
# PRADESH SAMACHARA (KANNADA) 7:05 AM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವರು: ವಿವೇಕಾದಿತ್ಯ ಕನಿಯಾಲ**

<><><>

**ಮುಖ್ಯಾಂಶಗಳು:**

- **ಬೆಂಗಳೂರಿನಲ್ಲಿ 'ಸ್ಕೈ ಡೆಕ್' ಪ್ರವಾಸಿ ತಾಣ ನಿರ್ಮಿಸಲು ಶಾಸಕರ ಸಮ್ಮತಿ – ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ.**
- **ಮಕ್ಕಳಿಗೆ ಗುಣಮಟ್ಟದ ಮೌಲ್ಯಾಧಾರಿತ ಶಿಕ್ಷಣ ನೀಡುವಂತೆ ಸಚಿವ ಡಾಕ್ಟರ್ ಜಿ.ಪರಮೇಶ್ವರ ಕರೆ.**
- **ಇಂದು ಬೆಳಗ್ಗೆ 11 ಗಂಟೆಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 'ಮನ್ ಕಿ ಬಾತ್'**
- **'ಪ್ರಕೃತಿಯೊಂದಿಗೆ ಸಾಮರಸ್ಯದಿಂದ ಸುಸ್ಥಿರವಾಗಿ ಬದುಕುವುದು' ಧ್ಯೇಯ ವಾಕ್ಯದೊಂದಿಗೆ ಇಂದು ವಿಶ್ವ ಪ್ರಕೃತಿ ಸಂರಕ್ಷಣಾ ದಿನಾಚರಣೆ.**

<><><>

ಈಗ ವಾರ್ತೆಗಳ ವಿವರ

<><><>

**ಬೆಂಗಳೂರಿನ ಸಮಗ್ರ ಅಭಿವೃದ್ಧಿಯ ಹಿತದೃಷ್ಟಿಯಿಂದ** ನಗರದ ಎಲ್ಲ ಶಾಸಕರ ಸಭೆ ನಡೆಸಲಾಯಿತು. ಈ ಸಭೆಯಲ್ಲಿ ಸಂಚಾರ, ಕಸದ ವಿಲೇವಾರಿ, ಕುಡಿಯುವ ನೀರು, ಅಕ್ರಮ ಕಟ್ಟಡ, ಮೆಟ್ರೋ ಸೇರಿದಂತೆ ಹಲವು ವಿ ‘ಯಗಳ ಕುರಿತು ಚರ್ಚಿಸಲಾಯಿತು ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಭೂಸ್ವಾಧೀನಕ್ಕೆ ಕ ್ಟವಾಗಿರುವ ಹಿನ್ನೆಲೆಯಲ್ಲಿ ಇನ್ನು ಮುಂದೆ ಮೆಟ್ರೊ ಮಾಡುವ ಕಡೆಗಳಲ್ಲಿ ಡಬ್ಬಲ್ ಡೆಕ್ಕರ್ ನಿರ್ಮಿಸುವ ಗುರಿ ಹೊಂದಿದ್ದು, ಬಿಬಿಎಂಪಿ ಮತ್ತು ಮೆಟ್ರೊ ಅನುದಾನ ನೀಡಲಿವೆ. ಬೆಂಗಳೂರಿನ 4 ಕಡೆ ಕಸ ವಿಲೇವಾರಿಗೆ ಸ್ಥಳ ನಿಗದಿ, 12 ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ 100 ಕಿಲೋ ಮೀಟರ್ ಉದ್ದದ ಸಿಗ್ನಲ್ ಫ್ರೀ ಕಾರಿಡಾರ್ ನಿರ್ಮಾಣದ ಕುರಿತಂತೆಯೂ ಚರ್ಚಿಸಲಾಗಿದೆ ಎಂದು ತಿಳಿಸಿದರು.

ಐಫೆಲ್ ಟವರ್ ಮಾದರಿಯಲ್ಲಿ ಬೆಂಗಳೂರಿನ ನೈಸ್ ರಸ್ತೆಯಲ್ಲಿ 25 ಎಕರೆ ವ್ಯಾಪ್ತಿಯಲ್ಲಿ ಸುಮಾರು 400 ರಿಂದ 500 ಕೋಟಿ ರೂಪಾಯಿ ವೆಚ್ಚದಲ್ಲಿ ಸರ್ಕಾರದ ವತಿಯಿಂದಲೇ 'ಸ್ಕೈ ಡೆಕ್' ಪ್ರವಾಸಿ ತಾಣ ನಿರ್ಮಿಸಲು ಉದ್ದೇಶಿಸಿದ್ದು, ಸಚಿವ ಸಂಪುಟದ ಮುಂದೆ ತರಲು ಒಪ್ಪಿಗೆ ನೀಡಿದ್ದಾರೆ. ಇದರ ಜೊತೆಗೆ ಬೆಂಗಳೂರಿನ ಎಲ್ಲ ಶಾಸಕರು ವಿಶೇ ’ ಅನುದಾನ ಕೇಳಿದ್ದು, ಕ್ಷೇತ್ರಗಳ ಅಗತ್ಯಕ್ಕೆ ತಕ್ಕಂತೆ ಅನುದಾನ ನೀಡಲಾಗುವುದು ಎಂದು ತಿಳಿಸಿದರು.

<><><>

**ಗುಣಮಟ್ಟದ ಮೌಲ್ಯಾಧಾರಿತ ಶಿಕ್ಷಣ ನೀಡುವ ಮೂಲಕ ಮಕ್ಕಳನ್ನು ದೇಶದ** ಸಂಪತ್ತನ್ನಾಗಿ ರೂಪಿಸಬೇಕು ಎಂದು ಗೃಹ ಖಾತೆ ಸಚಿವ ಡಾಕ್ಟರ್ ಜಿ.ಪರಮೇಶ್ವರ ಕರೆ ನೀಡಿದರು.

ತುಮಕೂರಿನಲ್ಲಿ ಹಮ್ಮಿಕೊಂಡಿದ್ದ "ಜಿಲ್ಲಾ ಶೈಕ್ಷಣಿಕ ಬಲವರ್ಧನಾ ಕಾರ್ಯಾಗಾರ" ಉದ್ಘಾಟಿಸಿ ಮಾತನಾಡಿದ ಅವರು, ವಿಶ್ವದಲ್ಲಿಯೇ ಅತೀ ಹೆಚ್ಚು ಮಾನವ ಸಂಪನ್ಮೂಲ ಉತ್ಪಾದಿಸುವ ರಾಷ್ಟ್ರ ನಮ್ಮದಾಗಿದ್ದು, ಗುರುಕುಲ ಪದ್ಧತಿಯಿಂದ ಪ್ರಾರಂಭಗೊಂಡು ಈಗಿನ ಆಧುನಿಕ ಭಾರತದ ವಿಶ್ವ ವಿದ್ಯಾನಿಲಯಗಳವರೆಗೂ ಇಡೀ ಪ್ರಪಂಚಕ್ಕೆ ಜ್ಞಾನಾರ್ಜನೆ ನೀಡುವ ಕೆಲಸ ಮಾಡುತ್ತಿದೆ ಎಂದು ತಿಳಿಸಿದರು.

<><><>

**ರಾಜ್ಯ ಸರ್ಕಾರವು ಪ್ರವಾಹ ಪರಿಸ್ಥಿತಿ** ಎದುರಿಸಲು ಸಶಕ್ತವಾಗಿದೆ ಎಂದು ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ ತಿಮ್ಮಾಪುರ ಹೇಳಿದ್ದಾರೆ.

ಬಾಗಲಕೋಟೆ ಜಿಲ್ಲೆ ಘಟಪ್ರಭಾ ನದಿಪಾತ್ರದ ಮಿರ್ಜಿ ಹಾಗೂ ಮುಧೋಳ ನಗರದ ಯಾದವಾಡ ಪ್ರದೇಶಕ್ಕೆ ಭೇಟಿ ನೀಡಿ ಪ್ರವಾಹ ಪರಿಸ್ಥಿತಿ ಅವಲೋಕಿಸಿ ನಂತರ ಮಾತನಾಡಿದ ಅವರು, ಪ್ರಸ್ತುತ 76 ಕ್ಯುಸೆಕ್ ನೀರು ಘಟಪ್ರಭಾ ನದಿಗೆ ಹರಿದು ಬರುತ್ತಿದೆ. ಆಲಮಟ್ಟಿ ಜಲಾಶಯದಿಂದ ಮೂರು ಲಕ್ಷ ಕ್ಯುಸೆಕ್ ನೀರನ್ನು ಹೊರಬಿಡಲಾಗುತ್ತಿದೆ. ಈಗಾಗಲೇ ನದಿ ಪಾತ್ರದ ಜನರಿಗೆ ಜಾಗ್ರತಾ ನಿರ್ದೇಶನ ನೀಡಲಾಗಿದೆ. ಪ್ರವಾಹಕ್ಕೆ ತುತ್ತಾಗುವ ಗ್ರಾಮಗಳ ಜನರಿಗೆ ಎಲ್ಲ ರೀತಿಯ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ತಿಳಿಸಿದರು.

<><><>

**ರಾಜ್ಯದಲ್ಲಿ ಈಗಾಗಲೇ ಪ್ರವಾಹ** ಪೀಡಿತ ಪ್ರದೇಶಗಳಲ್ಲಿ 114 ಆರೈಕೆ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಕಂದಾಯ ಖಾತೆ ಸಚಿವ ಕೃ ್ಣಭೈರೇಗೌಡ ಹೇಳಿದ್ದಾರೆ.

ಹಾಸನ ಜಿಲ್ಲೆಯ ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ, ಪರಿಶೀಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಸ್.ಡಿ.ಆರ್.ಎಫ್ ನಿಯಮದ ಅನುಸಾರ ಸಂತ್ರಸ್ತ ಕುಟುಂಬಗಳಿಗೆ 1 ಲಕ್ಷದ 20 ಸಾವಿರ ರೂಪಾಯಿ ಪರಿಹಾರ ಹಾಗೂ ಮನೆ ನಿರ್ಮಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆ ಎಂದರು.

<><><>

**ಬದುಕಿನಲ್ಲಿ ಶಿಕ್ಷಣ ಬಹಳ ದೊಡ್ಡ ಪಾತ್ರವಹಿಸಲಿದ್ದು, ಶಿಕ್ಷಣ ಪಡೆಯುವುದರಿಂದ** ಸ್ವಾವಲಂಬನೆಯಿಂದ ಜೀವನ ಮಾಡುವ ಸಾಮರ್ಥ್ಯ ಬೆಳೆಯಲಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಖಾತೆ ಸಚಿವ ಡಿ.ಸುಧಾಕರ್ ಹೇಳಿದ್ದಾರೆ.

ಚಿತ್ರದುರ್ಗದಲ್ಲಿ ನಿನ್ನೆ ಹಮ್ಮಿಕೊಂಡಿದ್ದ "ಕೃಷಿ ಶಿಕ್ಷಣ ಸುಗ್ಗಿ" ಕಾರ್ಯಕ್ರಮ ಉದ್ಘಾಟಿಸಿ ನಂತರ ಮಾತನಾಡಿದ ಅವರು, ಜಿಲ್ಲೆಯ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಕೃಷಿ ಶಿಕ್ಷಣ ಮಾಹಿತಿ ಕೊಡುವ ಉದ್ದೇಶದಿಂದ ಕೃಷಿ ಶಿಕ್ಷಣ ಸುಗ್ಗಿ ಕಾರ್ಯಕ್ರಮ ಆಯೋಜಿಸಲಾಗಿದೆ. ಸರ್ವರಿಗೂ ಶಿಕ್ಷಣ ದೊರೆಯಬೇಕು ಎಂಬ ಉದ್ದೇಶದಿಂದ ಶಾಲಾ–ಕಾಲೇಜು, ವಿಶ್ವವಿದ್ಯಾಲಯ, ಶೈಕ್ಷಣಿಕ

ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಶಿಕ್ಷಣವನ್ನು ಗ್ರಾಮೀಣ ವಿದ್ಯಾರ್ಥಿಗಳ ಬಳಿಗೆ ಕೊಂಡ್ಯೊಯುವ ಕೆಲಸ ಸರ್ಕಾರ ಮಾಡುತ್ತಿದೆ ಎಂದು ತಿಳಿಸಿದರು.

<><><>

**ಮೈಸೂರಿನ ಮುಡಾ ಹಗರಣ ಹಾಗೂ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿನ** ಹಣ ದುರುಪಯೋಗ ಸಂಬಂಧ, ಎರಡೂ ಪ್ರಕರಣಗಳ ತನಿಖೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕ್ರಮ ಕೈಗೊಂಡಿರುವುದು ಸ್ವಾಗತಾರ್ಹ. ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವುದು ಖಚಿತ ಎಂದು ಸಹಕಾರ ಖಾತೆ ಸಚಿವ ಕೆ.ಎನ್.ರಾಜಣ್ಣ ಹೇಳಿದ್ದಾರೆ.

ತುಮಕೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಎರಡೂ ಪ್ರಕರಣಗಳ ಸಂಬಂಧ ವಿರೋಧ ಪಕ್ಷದ ನಾಯಕರು ಪಾದಯಾತ್ರೆ ನಡೆಸಲು ಉದ್ದೇಶಿಸಿರುವುದನ್ನು ಕೈಬಿಡಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಅಹಿಂದ ಸಂಘಟನೆಗಳಿಂದ ಪ್ರತಿಯಾಗಿ ಪ್ರತಿಭಟನೆ ನಡೆಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಸಹಕಾರ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಅಗತ್ಯ ಕ್ರಮ ಕೈಗೊಂಡಿದೆ ಎಂದು ಅವರು ಇದೇ ಸಂದರ್ಭದಲ್ಲಿ ತಿಳಿಸಿದರು.

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.**

<><><>

**2047ರ ವೇಳೆಗೆ ಅಭಿವೃದ್ಧಿ ಹೊಂದಿದ ವಿಕಸಿತ ಭಾರತ ಪ್ರತಿಯೊಬ್ಬ ಭಾರತೀಯನ** ಮಹತ್ವಾಕಾಂಕ್ಷೆಯಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ.

ನೀತಿ ಆಯೋಗದ 9ನೇ ಆಡಳಿತ ಮಂಡಳಿಯ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಆಯೋಗದ ಅಧ್ಯಕ್ಷರೂ ಆಗಿರುವ ಪ್ರಧಾನಿ, ರಾಜ್ಯಗಳು ಜನರೊಂದಿಗೆ ನೇರ ಸಂಪರ್ಕ ಹೊಂದಿರುವುದರಿಂದ ಈ ಮಹತ್ವಾಕಾಂಕ್ಷೆಯ ಗುರಿಯನ್ನು ಸಾಧಿಸುವಲ್ಲಿ ಸಕ್ರಿಯ ಪಾತ್ರ ವಹಿಸಬಹುದಾಗಿದೆ ಎಂದು ಹೇಳಿದರು.

<><><>

**ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಆಕಾಶವಾಣಿಯ 'ಮನ್ ಕಿ ಬಾತ್'** ಕಾರ್ಯಕ್ರಮದಲ್ಲಿ, ಇಂದು ಬೆಳಗ್ಗೆ 11 ಗಂಟೆಗೆ, ದೇಶದ ಜನತೆಯೊಂದಿಗೆ ತಮ್ಮ ವಿಚಾರಗಳನ್ನು ಹಂಚಿಕೊಳ್ಳಲಿದ್ದಾರೆ.

ಇದು ಮನ್ ಕಿ ಬಾತ್ ನ 112ನೇ ಸಂಚಿಕೆಯಾಗಿದೆ.

ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಈ ಕಾರ್ಯಕ್ರಮ ಬಿತ್ತರವಾಗಲಿದೆ.

<><><>

**ಇಂದು ವಿಶ್ವ ಪ್ರಕೃತಿ ಸಂರಕ್ಷಣಾ ದಿನ.** ಆರೋಗ್ಯಕರ ಪರಿಸರ ಮತ್ತು ನೈಸರ್ಗಿಕ ಸಂಪನ್ಮೂಲಗಳನ್ನು ಸಂರಕ್ಷಿಸುವ ಅಗತ್ಯವನ್ನು ಪ್ರತಿಪಾದಿಸುತ್ತದೆ.

'ಪ್ರಕೃತಿಯೊಂದಿಗೆ ಸಾಮರಸ್ಯದಿಂದ ಸುಸ್ಥಿರವಾಗಿ ಬದುಕುವುದು' ವಿಶ್ವ ಪ್ರಕೃತಿ ಸಂರಕ್ಷಣಾ ದಿನಾಚರಣೆಯ ಈ ವರ್ಷದ ಧ್ಯೇಯ ವಾಕ್ಯವಾಗಿದೆ.

ಸುಸ್ಥಿರ ಜೀವನ ಪದ್ಧತಿಗಳನ್ನು ಉತ್ತೇಜಿಸಲು ಮತ್ತು ನಿಸರ್ಗದೊಂದಿಗೆ  ಸಾಮರಸ್ಯ ಗಟ್ಟಿಗೊಳಿಸಲು ಪ್ರೇರೇಪಿಸುತ್ತದೆ.

<><><>

**ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಆಗಸ್ಟ್** ಎರಡನೇ ವಾರ ಅಥವಾ ಸ್ವಾತಂತ್ರ್ಯ ದಿನಾಚರಣೆ ನಂತರ ಕಲಬುರಗಿಯಲ್ಲಿ ವಿಭಾಗ ಮಟ್ಟದ ಜನಸ್ಪಂದನ ಸಭೆ ನಡೆಸಲು ಉದ್ದೇಶಿಸಿದ್ದಾರೆ ಎಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಕಲಬುರಗಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಂದು ಮುಖ್ಯಮಂತ್ರಿಯವರಿಂದ ಜಿಲ್ಲೆಯ ವಿವಿಧ ಯೋಜನೆಗಳ ಅಡಿಗಲ್ಲು, ಉದ್ಘಾಟನೆ ಹಾಗೂ ಸೌಲಭ್ಯ ವಿತರಣೆಯ ಸಂಪೂರ್ಣ ಮಾಹಿತಿಯನ್ನು ಜಿಲ್ಲಾ ಮಟ್ಟದ ಅಧಿಕಾರಿಗಳು ಆಗಸ್ಟ್ 5 ರೊಳಗೆ ಜಿಲ್ಲಾಡಳಿತಕ್ಕೆ ಸಲ್ಲಿಸುವಂತೆ ಸೂಚಿಸಲಾಗಿದೆ  ಎಂದರು.
ಗಾಣಗಾಪೂರ ಅಭಿವೃದ್ಧಿಗೆ ಬದ್ಧವಿರುವುದಾಗಿ ತಿಳಿಸಿದ ಸಚಿವರು, ಕಲಬುರಗಿ ಕೋಟೆ ಒತ್ತುವರಿ ತೆರವು ಸಹ ಸುಪ್ರೀಂಕೋರ್ಟ್ ನಿರ್ದೇಶನದಂತೆ ನಡೆಯಲಿದ್ದು, ಅಲ್ಲಿನ ನಿವಾಸಿಗಳ ಮನವೊಲಿಸುವ ಕಾರ್ಯ ನಡೆದಿದೆ ಎಂದರು

<><><>

**ಧಾರವಾಡ ವಿದ್ಯಾವರ್ಧಕ** ಸಂಘದ 135 ನೇ ಸಂಸ್ಥಾಪನಾ ದಿನಾಚರಣೆ ಸಂದರ್ಭ, ಸಿರಿಗನ್ನಡಂ ಗೆಲ್ಗೆ ಶ್ರೀ ರಾ.ಹ ದೇಶಪಾಂಡೆ ಪ್ರಶಸ್ತಿಯನ್ನು ಹಿರಿಯ ಸಾಹಿತಿ, ಕಾಂತಾವರ ಕನ್ನಡ ಸಂಘದ, ಸಂಸ್ಥಾಪಕ ಅಧ್ಯಕ್ಷ ಡಾಕ್ಟರ್ ನಾ. ಮೊಗಸಾಲೆ ಅವರಿಗೆ ಪ್ರದಾನಿಸಲಾಯಿತು.

ವಿಧಾನ ಪರಿಷತ್ ಸದಸ್ಯ ಎಸ್.ವಿ ಸಂಕನೂರ ಪ್ರಶಸ್ತಿ ಪ್ರದಾನಿಸಿ, ಮೊಗಸಾಲೆ ಅವರನ್ನು ಅಭಿನಂದಿಸಿದರು. ಕನ್ನಡ ಕಟ್ಟಿ ಬೆಳೆಸುವಲ್ಲಿ ವಿದ್ಯಾವರ್ಧಕ ಸಂಘ, ಕಾಂತಾವರ ಕನ್ನಡ ಸಂಘದ ಕೊಡುಗೆ ಹಾಗೂ ಕಾರ್ಯವೈಖರಿಯನ್ನು ಸ್ಮರಿಸಿದರು.

<><><>

**ರಾಜ್ಯಾದ್ಯಂತ ಜೋರಾದ ಗಾಳಿಯೊಂದಿಗೆ ಕರಾವಳಿ ಜಿಲ್ಲೆಗಳಲ್ಲಿ ವ್ಯಾಪಕವಾಗಿ** ಸಾಧಾರಣದಿಂದ ಭಾರಿ ಮಳೆ ಹಾಗೂ ಅಲ್ಲಲ್ಲಿ ಅತಿ ಭಾರಿ ಮಳೆ, ಮಲೆನಾಡು ಜಿಲ್ಲೆಗಳಲ್ಲಿ ಕೆಲವೆಡೆ ಸಾಧಾರಣ ಮಳೆ ಹಾಗೂ ಅಲ್ಲಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆಯನ್ನು ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ನೀಡಿದೆ.

ಉತ್ತರ ಒಳನಾಡು ಮತ್ತು ದಕ್ಷಿಣ ಒಳನಾಡು ಜಿಲ್ಲೆಗಳಲ್ಲಿ ಅಲ್ಲಲ್ಲಿ ಚದುರಿದಂತೆ ಸಾಧಾರಣ ಮಳೆ, ಅಲ್ಲಲ್ಲಿ ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ತಿಳಿಸಿದೆ.

<><><>

**ಈಗ ಸಂಕ್ಷಿಪ್ತ ಸುದ್ದಿಗಳು**

**ಕಲಬುರಗಿ ಮಹಾನಗರ ಪಾಲಿಕೆಯ ಘನತ್ಯಾಜ್ಯ** ನಿರ್ವಹಣೆಗೆ ಪಾಲಿಕೆಯ ವಿವಿಧ ಅನುದಾನದಡಿ ಸುಮಾರು 6ಕೋಟಿ 68 ಲಕ್ಷ ರೂಪಾಯಿ ವೆಚ್ಚದಲ್ಲಿ ಖರೀದಿಸಲಾದ 11 ವಾಹನಗಳನ್ನು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಉದ್ಘಾಟಿಸಿ ಪಾಲಿಕೆಗೆ ಹಸ್ತಾಂತರಿಸಿದರು.

**ಪೌರಕಾರ್ಮಿಕರ** ಬೇಡಿಕೆಗಳ ಬಗ್ಗೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರೊಂದಿಗೆ ಚರ್ಚಿಸಿ, ರಾಜ್ಯ ಸರ್ಕಾರದ ಗಮನಕ್ಕೆ ತರುವುದಾಗಿ ಶಾಸಕ ಮಹೇಶ ಟೆಂಗಿನಕಾಯಿ ಹೇಳಿದ್ದಾರೆ. ಹುಬ್ಬಳ್ಳಿಯ ಮಹಾನಗರ ಪಾಲಿಕೆಯ ಆವರಣದಲ್ಲಿ ಪ್ರತಿಭಟನ ಸ್ಥಳಕ್ಕೆ ಭೇಟಿ ನೀಡಿ ಅಹವಾಲು ಸ್ವೀಕರಿಸಿದ ನಂತರ ಸುದ್ದಿಗಾರರಿಗೆ ಅವರು ಈ ಮಾಹಿತಿ ನೀಡಿದರು.

<><><>

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:**

- **ಬೆಂಗಳೂರಿನಲ್ಲಿ 'ಸ್ಕೈ ಡೆಕ್' ಪ್ರವಾಸಿ ತಾಣ ನಿರ್ಮಿಸಲು ಶಾಸಕರ ಸಮ್ಮತಿ – ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ.**
- **ಮಕ್ಕಳಿಗೆ ಗುಣಮಟ್ಟದ ಮೌಲ್ಯಾಧಾರಿತ ಶಿಕ್ಷಣ ನೀಡುವಂತೆ ಸಚಿವ ಡಾಕ್ಟರ್ ಜಿ.ಪರಮೇಶ್ವರ ಕರೆ.**
- **ಇಂದು ಬೆಳಗ್ಗೆ 11 ಗಂಟೆಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 'ಮನ್ ಕಿ ಬಾತ್'**
- **'ಪ್ರಕೃತಿಯೊಂದಿಗೆ ಸಾಮರಸ್ಯದಿಂದ ಸುಸ್ಥಿರವಾಗಿ ಬದುಕುವುದು' ಧ್ಯೇಯ ವಾಕ್ಯದೊಂದಿಗೆ ಇಂದು ವಿಶ್ವ ಪ್ರಕೃತಿ ಸಂರಕ್ಷಣಾ ದಿನಾಚರಣೆ.**

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 9 ಗಂಟೆ 5 ನಿಮಿಷಕ್ಕೆ.**

<><><>